# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 990(1293)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ವೈದ್ಯರುಗಳ ಬಗ್ಗೆ

(ಅ) ರಾಜ್ಯದ ಹಲವಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸರ್ಕಾರಿ ವೈದ್ಯರು ವಾರದಲ್ಲಿ ಒಂದೆರಡು ದಿನ ಮಾತ್ರ ಭೇಟಿ ನೀಡಿ ಉಳಿದ ದಿನಗಳಲ್ಲಿ ಸ್ವಂತ ಕ್ಲಿನಿಕ್‌ಗಳನ್ನು ತೆರದು ಸೇವೆ ಸಲ್ಲಿಸುತ್ತಿದ್ದು ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯ ಎಷ್ಟು ಹಳ್ಳಿಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ; ಅದರಲ್ಲಿ ಎಷ್ಟು ಆಸ್ಪತ್ರೆಗಳಲ್ಲಿ ವೈದ್ಯರು ನೇಮಕವಾಗಿದ್ದಾರೆ;

(ಇ) ವೈದ್ಯರನ್ನು ನೇಮಕ ಮಾಡದೇ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು; ಹಾಗೂ ನೇಮಕಾತಿ ಮಾಡದೇ ಇರಲು ಕಾರಣವೇನು;

(ಈ) ನಗರದಲ್ಲಿ ಸ್ವಂತ ಕ್ಲಿನಿಕ್‌ಗಳನ್ನು ತೆರೆದುಕೊಂಡಿರುವ ಸರ್ಕಾರಿ ವೈದ್ಯರುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಉ) ವೈದ್ಯರು ಹಳ್ಳಿಗೆ ತೆರಳಿ ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸಲು ಸರ್ಕಾರ ಕೈಗೊಂಡ ಕ್ರಮವೇನು?